**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

**ಸಂ: ಸಿ4(5)ಪ್ರೌ.ಶಿ./ಎಂಪಿಕ್/ಸುತ್ತೋಲೆ–1/2018–19** **ದಿನಾಂಕ: 31.01.2019**

**: : ಸುತ್ತೋಲೆ : :**

ವಿಷಯ: ಶಿಕ್ಷಕರು ಶಾಲಾ ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಬಗ್ಗೆ.
ಉಲ್ಲೇಖ: ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಎಂಪಿಕ್ ಮಾಸಿಕ ಸಭೆ ದಿನಾಂಕ:18.01.2019.

**********

ಶಿಕ್ಷಕರು ಗುಣಾತ್ಮಕ ಶಿಕ್ಷಣದ ಬಗ್ಗೆ ಗಮನಹರಿಸದೆ ವಿವಿಧ ಸಭೆ ಸಮಾರಂಭಗಳಲ್ಲಿ ಭಾಗವಹಿಸಲು ಆಸಕ್ತಿ ತೋರುತ್ತಿರುವುದರಿಂದಾಗಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ತೊಡಕು ಉಂಟಾಗುತ್ತಿರುವುದನ್ನು ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಗಮನಿಸಿದ್ದು, ಈ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ ಉಲ್ಲೇಖಿತ ಸಭೆಯಲ್ಲಿ ಸೂಚಿಸಿರುತ್ತಾರೆ.

ವಿದ್ಯಾರ್ಥಿಗಳ ಶೈಕ್ಷಣಿಕ ಸರ್ವತೋಮುಖ ಪ್ರಗತಿಗೆ ಕಾರಣವಾಗಬೇಕಾದ ಶಿಕ್ಷಕರು ತಮ್ಮ ಜವಾಬ್ದಾರಿಗಳನ್ನು ಮರೆತು ಶಾಲಾ ಅವಧಿಗಳಲ್ಲಿ ವಿವಿಧ ಸಭೆ ಸಮಾರಂಭಗಳಲ್ಲಿ ಭಾಗಹಿಸಿ, ತಮ್ಮ ಬೋದನಾ ಅವಧಿಯನ್ನು ಕಳೆಯುತ್ತಿರುತ್ತಾರೆ. ಇದರಿಂದಾಗಿ ಶೈಕ್ಷಣಿಕ ಪ್ರಗತಿಯು ಕುಸಿಯುತ್ತಿದೆ. ಇದು ಆರೋಗ್ಯಕರ ಬೆಳಗಣಿಗೆಯಲ್ಲ. ಇಲಾಖೆಯ ಅಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯಗಳನ್ನು ಪರಿಶೀಲಿಸಿದಾಗ ವಾಸ್ತವಾಂಶಗಳು ಬೆಳಕಿಗೆ ಬರುತ್ತದೆ. ಶಿಕ್ಷಕರು ತಮ್ಮ ಪಾಠ ಟಿಪ್ಪಣಿ ಮತ್ತು ಪಾಠ ಯೋಜನೆಯಂತೆ ವಿಷಯವಾರು ಪಾಠಗಳನ್ನು ಬೋದಿಸುತ್ತಿರುವುದು ಸಾಮಾನ್ಯ ಸಂಗತಿಯಾಗಿದೆ. ಇದು ಎಷ್ಟರಮಟ್ಟಿಗೆ ಫಲಕಾರಿಯಾಗಿದೆ. ಇಂತಹ ಸಭೆ ಸಮಾರಂಭಗಳಲ್ಲಿ ಭಾಗವಹಿಸುವ ಶಿಕ್ಷಕರು ಬೋದನಾ ಅವಧಿಯ ಕೊರತಯಿಂದಾಗಿ ತಮ್ಮ ವಿಷಯಕ್ಕೆ ಸಂಬಂಧಿಸಿದ ಪಠ್ಯಕ್ರಮಗಳನ್ನು ಮುಗಿಸುವ ಧಾವಂತದಲ್ಲಿ ಮಕ್ಕಳಿಗೆ ಮನದಟ್ಟು ಮಾಡುವಲ್ಲಿ ವಿಫಲರಾಗುತ್ತಿದ್ದಾರೆ. ಹಾಗೂ ಬದಲಾಗುತ್ತಿರುವ ಪಠ್ಯಕ್ರಮಕ್ಕೆ ತಕ್ಕಂತೆ ಇಲಾಖೆಯು ವಿಷಯವಾರು ತರಬೇತಿಗಳನ್ನು ಮತ್ತು ಕಾರ್ಯಗಾರಗಳನ್ನು ಹಮ್ಮಿಕೊಳ್ಳುತ್ತಿದ್ದು, ಸಾಕಷ್ಟು ಶಿಕ್ಷಕರು ತರಬೇತಿಗಳಿಗೆ ಗೈರಾಗಿ, ಪಠ್ಯಕ್ರಮಕ್ಕೆ ಹೊಂದಿಕೊಳ್ಳದೆ, ಹಳೆ ಕ್ರಮವನ್ನೇ ಅನುಸರಿಸಿ ಪಾಠಬೋದನೆ ಮಾಡುತ್ತಿರುತ್ತಾರೆ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಸ್ಥಳೀಯ ಅಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳು ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ಮಿಂಚಿನ ಸಂಚಾರ ಸಂದರ್ಭದಲ್ಲಿ ಶೈಕ್ಷಣಿಕ ವರ್ಷದ ಮಧ್ಯಂತರದಲ್ಲಿ ಹಾಗೂ ಶೈಕ್ಷಣಿಕ ವರ್ಷದ ಅಂತ್ಯಕ್ಕೆ ಎರಡು ತಿಂಗಳು ಮುಂಚಿತವಾಗಿ ಶಾಲೆಗಳಿಗೆ ಭೇಟಿ ನೀಡಿ ಶಿಕ್ಷಕರ ಪಾಠ ವೀಕ್ಷಣೆ ಮಾಡಿ ಮಾರ್ಗದರ್ಶನ ನೀಡುವುದಲ್ಲದೆ ಹಿಂದಿನ ಭೇಟಿ ಸಂದರ್ಭಗಳಲ್ಲಿ ನೀಡಲಾದ ಸೂಚನೆಗಳನ್ನು ಸುಧಾರಿಸಿಕೊಂಡಿರುವ ಬಗ್ಗೆ ಪರಿಶೀಲಿಸುವುದು ಹಾಗೂ ವಿವಿಧ ಸಭೆ ಸಮಾರಂಭಗಳಲ್ಲಿ ಭಾಗಹಿಸುವ ಶಿಕ್ಷಕರಿಗೆ ಸೂಕ್ತ ಮಾರ್ಗದರ್ಶನ ನೀಡಿ ಕೊರತೆಯಾದ ಬೋಧನಾ ಅವಧಿಯನ್ನು ಸರಿದೂಗಿಸಿಕೊಂಡ ಬಗ್ಗೆ ಅನುಪಾಲನೆ ಮಾಡುವಂತೆ ತಿಳಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

**ಇವರಿಗೆ:–**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ/ ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಮಾನ್ಯ ಘನತೆವೆತ್ತ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು ರವರಿಗೆ
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಕೊಠಡಿ ಸಂಖ್ಯೆ: 262/262ಎ, ವಿಧಾನಸೌಧ, 2ನೇ ಮಹಡಿ, ಬೆಂಗಳೂರು–01ರವರಿಗೆ.

–ಪು.ತಿ.ನೋ.

3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರಿಗೆ.
4. ರಾಜ್ಯ ಯೋಜನಾ ನಿರ್ದೇಶಕರು, ಎಸ್.ಎಸ್.ಎ/ಆರ್.ಎಂ.ಎಸ್.ಎ., ನೃಪತುಂಗ ರಸ್ತೆ, ಬೆಂಗಳೂರುರವರಿಗೆ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳಿಗೆ.
8. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರುರವರಿಗೆ.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಂಶುಪಾಲರ ಮತ್ತು ಪ್ರೌಢಶಾಲಾ ಮುಖ್ಯಶಿಕ್ಷಕರ ಸಂಘ, ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘ, ಬೆಂಗಳೂರುರವರಿಗೆ.
11. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು.
12. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
13. ಕಛೇರಿ ಪ್ರತಿ.